# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಬಳ್ಳಾರಿ -ಜಿಲ್ಲೆ, ಕೂಡ್ಲಗಿ ತಾಲ್ಲೂಕಿನ ಸರ್ಕಾರಿ ಬಾಲಕರ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ ಕಟ್ಟಡದ ದುರಸ್ತಿ ಕಾಮಗಾರಿಗಳಲ್ಲಿ ನಡೆದ ಅವ್ಯವಹಾರದಲ್ಲಿ ಭಾಗಿಯಾಗಿರುವ ಅಧಿಕಾರಿ / ನೌಕರರ ವಿರುದ್ಧದ ಇಲಾಖಾ ವಿಚಾರಣೆ - ದಂಡನೆ ವಿಧಿಸುವ ಬಗ್ಗೆ.

**ಓದಲಾಗಿದೆ.**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ಇವರ ಪತ್ರ ಸಂಖ್ಯೆ. ಜಿಪಂಬ/ಸಿ2/ಸಕಇ/2008-09, ದಿನಾಂಕ. 13-05-2009
2. ಕಾರಣ ಕೇಳುವ ನೋಟೀಸ್ ಸಂಖ್ಯೆ. ಗ್ರಾಅಪ 117 ಜಿಪಅ 2009, ದಿನಾಂಕ. 25-07-2011
3. ಶ್ರೀ ಜಿ.ಎಂ.ಕಂಚಿಮಠ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಲಿಖಿತ ಹೇಳಿಕೆ ದಿನಾಂಕ. 10-08-2011
4. ಶ್ರೀ ಹೆಚ್. ನಾಗಪ್ಪ, ಸಹಾಯಕ ಇಂಜಿನಿಯರ್ ಇವರ ಲಿಖಿತ ಹೇಳಿಕೆ ದಿನಾಂಕ. 23-08-2011.
5. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 117 ಜಿಪಅ 2009 ದಿನಾಂಕ 04-11-2011.
6. ವಿಚಾರಣಾಧಿಕಾರಿಯವರು ಇಲಾಖಾ ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ದಿನಾಂಕ 30-05-2012.
7. 2ನೇ ಕಾರಣ ಕೇಳುವ ನೋಟೀಸ್ ದಿನಾಂಕ 05-07-2012

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ. 13-05-2009ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ ರವರು 2007-08ನೇ ಸಾಲಿನಲ್ಲಿ ಬಳ್ಳಾರಿ ಜಿಲ್ಲೆಯ ಕೂಡ್ಲಗಿ ತಾಲ್ಲೂಕಿನ ಸರ್ಕಾರಿ ಬಾಲಕರ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ ಕಟ್ಟಡದ ದುರಸ್ತಿಗಾಗಿ ಮಂಜೂರಾಗಿದ್ದ ಅನುದಾನವನ್ನು ವಾಸ್ತವವಾಗಿ ಉಪಯೋಗಿಸದೇ ಸುಮಾರು ರೂ. 1.75 ಲಕ್ಷಗಳಷ್ಟು ಹಣವನ್ನು ಆ ಸಂದರ್ಭದಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರಾಗಿ ಕೆಲಸ ನಿರ್ವಹಿಸುತ್ತಿದ್ದ ಶ್ರೀ ಜಿ.ಎಂ.ಕಂಚಿಮಠ ಹಾಗೂ ಸಹಾಯಕ ಇಂಜಿನಿಯರ್ ಆಗಿ ಕೆಲಸ ನಿರ್ವಹಿಸುತ್ತಿದ್ದ ಶ್ರೀ ಹೆಚ್. ನಾಗಪ್ಪ ಇವರುಗಳು ದುರುಪಯೋಗಪಡಿಸಿಕೊಂಡಿರುತ್ತಾರೆಂದು ವರದಿ ಮಾಡುತ್ತಾ, ಅವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಶಿಫಾರಸ್ಸು ಮಾಡಿದ್ದರು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 25-07-2011ರಲ್ಲಿ ಮೇಲ್ಕಂಡ ಎಲ್ಲಾ ಆಪಾದಿತ ಅಧಿಕಾರಿಗಳಿಗೆ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಅನುಬಂಧ-1 ರಿಂದ 4ನ್ನು ಜಾರಿ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (3) ಮತ್ತು (4)ರಲ್ಲಿ ಓದಲಾದ ದಿನಾಂಕಗಳಂದು ಶ್ರೀ ಜಿ.ಎಂ.ಕಂಚಿಮಠ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಹೆಚ್. ನಾಗಪ್ಪ, ಸಹಾಯಕ ಇಂಜಿನಿಯರ್ ರವರುಗಳು ಸಲ್ಲಿಸಿರುವ ಲಿಖಿತ ಹೇಳಿಕೆಗಳಲ್ಲಿ ಅವರುಗಳ ಮೇಲಿನ ಆಪಾದನೆಗಳನ್ನು ಅಲ್ಲಗಳೆಯುತ್ತಾ, ಅವರ ಮೇಲೆ ಹೊರಿಸಿರುವ ಆರೋಪಗಳನ್ನು ಕೈಬಿಡಬೇಕೆಂದು ವಿನಂತಿಸಿದ್ದರು.

ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ದಿನಾಂಕ. 04-11-2011ರ ಸರ್ಕಾರದ ಆದೇಶದಲ್ಲಿ ಆಪಾದಿತ ಅಧಿಕಾರಿಗಳಾದ ಶ್ರೀ ಜಿ.ಎಂ.ಕಂಚಿಮಠ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಹೆಚ್. ನಾಗಪ್ಪ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕೂಡ್ಲಿಗಿ ಇವರುಗಳ ವಿರುದ್ಧ ಜಂಟಿ ಇಲಾಖಾ ವಿಚಾರಣೆ ನಡೆಸಲು ಶ್ರೀ ಎ. ಕೃಷ್ಣಪ್ಪ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (6)ರಲ್ಲಿ ಓದಲಾದ ದಿನಾಂಕ. 30-05-2012ರಂದು ವಿಚಾರಣಾಧಿಕಾರಿಗಳು ವಿಚಾರಣಾ ವರದಿಯನ್ನು ಸಲ್ಲಿಸಿದ್ದು, ಸದರಿ ಆಪಾದಿತ ಆಪಾದಿತ ಅಧಿಕಾರಿಗಳ ವಿರುದ್ಧ ಮಾಡಲಾಗಿದ್ದ ಎಲ್ಲಾ ಆರೋಪಗಳು ರುಜುವಾತಾಗಿವೆ ಎಂದು ವರದಿ ನೀಡಿದ್ದಾರೆ.

ಮೇಲೆ ಕ್ರಮ ಸಂಖ್ಯೆ (7)ರಲ್ಲಿ ಓದಲಾದ ದಿನಾಂಕ 05-07-2012 ರಂದು ಶ್ರೀ ಜಿ.ಎಂ.ಕಂಚಿಮಠ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಶ್ರೀ ಹೆಚ್. ನಾಗಪ್ಪ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕೂಡ್ಲಿಗಿ ಇವರುಗಳಿಗೆ 2ನೇ ಕಾರಣ ಕೇಳುವ ನೋಟೀಸ್‌ಗಳನ್ನು ಜಾರಿಗೊಳಿಸಲಾಗಿತ್ತು. ಸದರಿ ನೋಟೀಸ್‌ಗಳಿಗೆ ಆಪಾದಿತ ಅಧಿಕಾರಿಗಳು ಅವರ ಸಮಜಾಯಿಷಿಗಳನ್ನು ನೀಡುತ್ತಾ, ಯಾವುದೇ ರೀತಿಯ ಕರ್ತವ್ಯ ನಿರ್ಲಕ್ಷತೆ ತೋರಿಸಿರುವುದಿಲ್ಲವೆಂದು ಮತ್ತು ಸರ್ಕಾರಕ್ಕೆ ನಷ್ಟವುಂಟು ಮಾಡಿಲ್ಲವೆಂದು ತಿಳಿಸುತ್ತಾ ಅವರುಗಳ ಮೇಲಿನ ಆರೋಪಗಳನ್ನು ಕೈ ಬಿಡಬೇಕೆಂದು ಕೋರಿರುತ್ತಾರೆ.

ಪ್ರಕರಣದಲ್ಲಿ ಆಪಾದಿತ ಅಧಿಕಾರಿಗಳು ಕಾಮಗಾರಿ ಪೂರ್ಣಗೊಳ್ಳುವ ಎಂಟು ದಿನಗಳ ಮುಂಚೆ ಗುತ್ತಿಗೆದಾರರಿಗೆ ಚೆಕ್ ನೀಡಿದ್ದು, ಆಡಳಿತಾತ್ಮಕ ಪ್ರಕ್ರಿಯೆಯಲ್ಲಿ ಲೋಪ ಉಂಟಾಗಿರುವುದನ್ನು ಮನಗಂಡು ಹಾಗೂ ಇಲಾಖಾ ವಿಚಾರಣೆಯಲ್ಲಿ ರುಜುವಾತಾದ ಆರೋಪಗಳಿಗನುಗುಣವಾಗಿ ಸದರಿ ಇಬ್ಬರು ಆರೋಪಿತ ಅಧಿಕಾರಿಗಳ ಮೇಲೆ ಲಘು ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ. ಗ್ರಾಅಪ 117 ಜಿಪಅ 2009, ಬೆಂಗಳೂರು,**
**ದಿನಾಂಕ 19-07-2013**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಿ.ಎಂ.ಕಂಚಿಮಠ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕೂಡ್ಲಿಗಿ [ಪ್ರಸ್ತುತ ಸಹಾಯಕ ಕಾರ್ಯಪಾಲಕ ಇಂಜಿನಿಯರ್,

---3

ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಿಹರ] ಹಾಗೂ ಶ್ರೀ ಹೆಚ್. ನಾಗಪ್ಪ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕೂಡ್ಲಿಗಿ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8 (iii)ರನ್ವಯ ಅವರ ಮುಂದಿನ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮದೊಂದಿಗೆ ತಡೆಹಿಡಿಯುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ /
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಳ್ಳಾರಿ / ದಾವಣಗೆರೆ
6. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕೂಡ್ಲಿಗಿ.
7. ಶ್ರೀ ಜಿ.ಎಂ.ಕಂಚಿಮಠ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹರಿಹರ.
8. ಶ್ರೀ ನಾಗಪ್ಪ, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಕೂಡ್ಲಿಗಿ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ) / (ಸೇವೆಗಳು-ಸಿ)
10. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.